ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,**
**ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ,**
**ಅರಮನೆ ರಸ್ತೆ, ಬೆಂಗಳೂರು-560 001.**

ಸಂಖ್ಯೆ: ಡಿಟಿಇ 36 ಇಎಸ್‌ಟಿ(6) 2017 ದಿನಾಂಕ: 21-12-2018.

## -:ಸುತ್ತೋಲೆ:-

**ವಿಷಯ :** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳಿಗೆ ಸೆಕ್ಯೂರಿಟಿ ಗಾರ್ಡ್ ಸೇವೆಯನ್ನು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಪಡೆಯುವ ಬಗ್ಗೆ.

**ಉಲ್ಲೇಖ:**
1. ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ:ಡಿಟಿಇ/71/ಇಎಸ್‌ಟಿ(6)/2015 ದಿ: 14.01.2015
2. ಸರ್ಕಾರದ ಆದೇಶ ಸಂಖ್ಯೆ:ಆಇ 3 ಟಿಎಫ್‌ಪಿ 2017, ದಿನಾಂಕ: 07.07.2017.
3. ಸಾರ್ವಜನಿಕ ಪಾರದರ್ಶಕತೆ ಖರೀದಿ ನಿಯಮಗಳು (Karnataka Transparency in Public Procurements Rules-KTPP) 1999 ಮತ್ತು 2000.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಕಾಇ 51 ಎಲ್‌ಡಬ್ಲ್ಯೂ 2017 ದಿನಾಂಕ:29.12.2017.

***

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಕಛೇರಿ ಕಾವಲುಗಾರರನ್ನು ಸೇವಾ ಗುತ್ತಿಗೆ (Service Contract) ಮೂಲಕ ನಿರ್ವಹಿಸಲು ಆದೇಶಿಸಿರುತ್ತದೆ. ಈ ಸಂಬಂಧ ಈಗಾಗಲೇ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ಗಮನಕ್ಕೆ ತರಬಯಸುವುದೇನೆಂದರೆ ಸಂಸ್ಥೆಗಳ ಕೊಠಡಿ, ದಾಸ್ತಾನು, ಕಂಪ್ಯೂಟರ್, ಲ್ಯಾಬ್‌ಗಳ ಹಾಗೂ ವಿದ್ಯಾರ್ಥಿ ನಿಲಯಗಳ ಭದ್ರತೆ ಹಿತದೃಷ್ಠಿಯಿಂದ ಸೆಕ್ಯೂರಿಟಿ ಗಾರ್ಡ್‌ಗಳ ಸೇವೆಯನ್ನು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಪಡೆಯಲು ಉಲ್ಲೇಖ(1)ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಅದರಂತೆ ಉಲ್ಲೇಖ(4)ರ ಸುತ್ತೋಲೆಯಲ್ಲಿ ತಿಳಿಸಿರುವ ನಿಬಂಧನೆಗಳಂತೆ ಟೆಂಡರ್ ಕರೆದು ತಮ್ಮ ಹಂತದಲ್ಲೆ ರಚಿಸಲಾದ ಸಮಿತಿಯ ಮೂಲಕ ಇ-ಪ್ರೊಕ್ಯೂರ್‌ಮೆಂಟ್ ಕರೆಯುವ ಮೊದಲು ವಿಧಿಸಲಾದ ನಿಬಂಧನೆಗಳಂತೆ ಸಮಿತಿಯ ಮುಂದೆ ಮಂಡಿಸಿ ಪರಿಶೀಲಿಸಿ ನಿಯಮದಂತೆ ಶಿಫಾರಸ್ಸು ಮಾಡತಕ್ಕದ್ದು, ನಿಬಂಧನೆಗಳನ್ನು ಉಲ್ಲಂಘಿಸಿದ್ದಲ್ಲಿ ನಿರ್ದೇಶಕರ ಹಂತದಲ್ಲಿ ಅನುಮೋದನೆ ನೀಡದೇ ಪ್ರಸ್ತಾವನೆಯನ್ನು ಹಿಂತಿರುಗಿಸಲಾಗುವುದು. ಸೆಕ್ಯೂರಿಟಿಗಾರ್ಡ್‌ಗಳ ಸೇವೆಯನ್ನು ಕೆ.ಟಿ.ಪಿ.ಪಿ ಅಧಿನಿಯಮ 1999 ಮತ್ತು ನಿಯಮಗಳು 2000ರ ಅನುಸಾರ ಪಡೆಯಲು ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು. ಭದ್ರತೆಗೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳದೇ ಸಂಸ್ಥೆಗಳ ಆಸ್ತಿ ಪಾಸ್ತಿ ಹಾನಿ ಉಂಟಾದಲ್ಲಿ ಮುಂದಿನ ಆಗು ಹೋಗುಗಳಿಗೆ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ,**

1) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ/ಸರ್ಕಾರಿ ಪಾಲಿಟೆಕ್ನಿಕ್‌ಗಳು/ಕಿರಿಯ ತಾಂತ್ರಿಕ ಶಾಲೆಗಳು/ಜಿಆರ್‌ಐಸಿಪಿ/ಎಸ್‌ಆರ್‌ಸಿಬಿಎಂ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
2) ಇ-ಆಡಳಿತ ವಿಭಾಗಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.
3) ಕಛೇರಿ ಪ್ರತಿ.